ಕರ್ನಾಟಕ ಸರ್ಕಾರ

# ಚಿಕ್ಕಾಡೆ ಗ್ರಾಮ ಪಂಚಾಯಿತಿ ಕಾರ್ಯಾಲಯ

ತಾಲ್ಲೂಕು ಪಂಚಾಯತ್, ಪಾಂಡವಪುರ

ಜಿಲ್ಲಾ ಪಂಚಾಯತ್, ಮಂಡ್ಯ

ಸಂ.ಚಿ.ಗ್ರಾ.ಪಂ: /2020-21

ದಿನಾಂಕ: .2020

ಗೆ,

ಶ್ರೀ.ಬಿ.ಎಸ್.ಯಡಿಯೂರಪ್ಪ ರವರು,
ಮಾನ್ಯ ಮುಖ್ಯಮಂತ್ರಿಗಳು,
ಕರ್ನಾಟಕ ಸರ್ಕಾರ, ವಿಧಾನ ಸೌಧ,
ಬೆಂಗಳೂರು.

ಮಾನ್ಯರೇ,

ವಿಷಯ:- ಗ್ರಾಮ ಪಂಚಾಯಿತಿಗಳಿಗೆ ಆಡಳಿತಾಧಿಕಾರಿಗಳು ಅಥವಾ ಆಡಳಿತ ಸಮಿತಿಯ ನೇಮಕದ ಬದಲಿಗೆ ಹಾಲಿ ಇರುವ ಚುನಾಯಿತ ಪ್ರತಿನಿಧಿಗಳನ್ನೇ ಚುನಾವಣೆ ನಡೆಯುವವರೆಗೆ ಮುಂದುವರೆಸುವ ಬಗ್ಗೆ ಒತ್ತಾಯಿಸಿ ಪತ್ರ

**************

ಇಡೀ ದೇಶಾದ್ಯಂತ ವ್ಯಾಪಕವಾಗಿ ಹರಡುತ್ತಿರುವ ಕೋವಿಡ್-19 ರ ಪರಿಣಾಮ ಕರ್ನಾಟಕದ ಮೇಲೂ ಆಗಿರುವುದರಿಂದ ರಾಜ್ಯದಲ್ಲಿನ ಆಡಳಿತ ವ್ಯವಸ್ಥೆಯಲ್ಲಿ ವಿವಿಧ ರೀತಿಯ ಬದಲಾವಣೆಗಳಾಗಿವೆ. ಇದರ ಪರಿಣಾಮ, ಕರ್ನಾಟಕದಲ್ಲಿ ಇದೇ ಮೇ ತಿಂಗಳ ಅಂತ್ಯದೊಳಗೆ ನೆಡೆಯಬೇಕಿದ್ದ ಗ್ರಾಮ ಪಂಚಾಯತ್ ಚುನಾವಣೆಯ ಮೇಲೂ ಉಂಟಾಗಿದೆ. ಈ ಕೋವಿಡ್-19 ರ ಸಂಕಷ್ಟದ ಸಮಯದಲ್ಲಿ ಚುನಾವಣೆಯಂತಹ ಕಾರ್ಯವನ್ನು ಕೈಗೆತ್ತಿಕೊಳ್ಳುವುದು ಅಸಾಧ್ಯವೇನು. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರ ಈಗಾಗಲೇ ಹೇಳಿರುವಂತೆ ಸುಮಾರು 06 ತಿಂಗಳುಗಳ ಕಾಲ ಚುನಾವಣೆ ಮುಂದೂಡಬೇಕಾಗಿರುವುದು ಅನಿವಾರ್ಯವಾಗಿದೆ. ಆದರೆ ಆಡಳಿತಾಧಿಕಾರಿಯ ನೇಮಕ ಅಥವಾ ಬೇರ್‍ಯಾವುದೋ ಉಸ್ತುವಾರಿ ಸಮಿತಿ ನೇಮಕ ಮಾಡುವ ಸರ್ಕಾರದ ಆಲೋಚನೆ ಕಾನೂನಿನಲ್ಲಿ ಅವಕಾಶವಿದ್ದರು, ಈ ವಿಕೋಪದ ಪರಿಸ್ಥಿತಿ ಇರುವಾಗ ಸೂಕ್ತವಾದುದ್ದಲ್ಲ. ಚುನಾಯಿತಿ ಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಸರ್ಕಾರದ ರಥದ ಎರಡು ಗಾಲಿಗಳಿದ್ದಂತೆ, ಸರ್ಕಾರದ ರಥ ಮುನ್ನಡೆಸುವಲ್ಲಿ ಇಬ್ಬರ ಪಾತ್ರವು ಬಹಳ ಪ್ರಮುಖವಾದುದ್ದು, ಗ್ರಾಮ ಪಂಚಾಯಿತಿ ಒಂದು ಸ್ಥಳೀಯ ಸ್ವಯಂ ಸರ್ಕಾರ ಹೀಗಾಗಿಯೇ ಇಡೀ ರಾಜ್ಯದಾದ್ಯಂತ ಕೋವಿಡ್-19 ರ ಪರಿಸ್ಥಿತಿ ಘೋಷಣೆಯಾದಾಗ ಮೊಟ್ಟ ಮೊದಲು ಸರ್ಕಾರ ಮಾಡಿದ ಕೆಲಸವೇನೆಂದರೆ, ಪಂಚಾಯತ್ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವ ಎಲ್ಲಾ ಇಲಾಖೆಗಳ ಸ್ವಯಂ ಸೇವ ಸಂಸ್ಥೆಗಳ, ಸ್ವಯಂ ಸೇವಕರ, ಸಂಯೋಜನೆಯಲ್ಲಿ ಜಾರಿಪಡೆ (ಕಾರ್ಯಪಡೆ) ರೂಪಿಸಿ ಇಡೀ ಪಂಚಾಯತ್‌ನ ವಿಕೋಪ ನಿರ್ವಹಣೆ ಜವಬ್ದಾರಿಯ ನೇತೃತ್ವವನ್ನು ಗ್ರಾಮ ಸರ್ಕಾರಕ್ಕೆ ನೀಡಿದ್ದು, ಚುನಾಯಿತ ಪ್ರತಿನಿಧಿಗಳಾದ ನಾವು ಪಂಚಾಯತ್ ಆಡಳಿತದಲ್ಲಿ ಸಕ್ರಿಯವಾಗಿ ಭಾಗವಹಿಸಿ ಅನುಭವ ಪಡೆದು ಗ್ರಾಮ ಪಂಚಾಯತ್ ಅಭಿವೃದ್ಧಿಯಲ್ಲಿ ನಮ್ಮ ಪಾತ್ರ ಜವಬ್ದಾರಿಗಳ ಮಹತ್ವವನ್ನು ಆಳವಾಗಿ ಅರ್ಥೈಸಿಕೊಂಡಿದ್ದರಿಂದ ವಿಕೋಪದ ಪರಿಸ್ಥಿತಿಯನ್ನು ಸಹ ನಿಭಾಯಿಸಲು ಸ್ಥಳೀಯ ಸರ್ಕಾರವಾಗಿ ನಮಗೆ ಸಾಧ್ಯವಾಯಿತು. ಈ ಸಂದರ್ಭದಲ್ಲಿ ಗ್ರಾಮೀಣ ಜನರ ಅಗತ್ಯತೆಗಳೇನು, ಇಲ್ಲಿನ ಪರಿಸ್ಥಿತಿ ಹೇಗಿದೆ, ಆಗಬೇಕಾದ ಪ್ರಮುಖ ಕಾರ್ಯಗಳೇನು, ಮುಂದಿರುವ

ಸವಾಲುಗಳೇನು ಎಂಬುದನ್ನು ಕೂಲಂಕುಶವಾಗಿ ಗಮನಿಸಿದ್ದೇವೆ. ಒಂದು ರೀತಿಯಲ್ಲಿ ತುರ್ತು ಪರಿಸ್ಥಿತಿಯಂತೆ. ಇರುವ ಈ ಸಮಯದಲ್ಲಿ ನಾವು ಸ್ಥಳೀಯ ಸರ್ಕಾರದ ಅವಿಭಾಜ್ಯ ಅಂಗವಾಗಿ ವಿಕೋಪವನ್ನು ಸಮರ್ಪಕವಾಗಿ ನಿಭಾಯಿಸುವಲ್ಲಿ ಜನರ ಸಂಕಷ್ಟಗಳಿಗೆ ಸ್ಪಂದಿಸುವಲ್ಲಿ ಉತ್ತರದಾಯಿಯಾಗಿ ಕಾರ್ಯ ನಿರ್ವಹಿಸಿರುತ್ತೇವೆ. ಚುನಾಯಿತಿ ವರ್ಗ ಹಾಗೂ ಅಧಿಕಾರಿ ವರ್ಗ ಒಗ್ಗೂಡಿ ಆಡಳಿತ ನಡೆಸಿರುವುದೆ ಈ ಪರಿಸ್ಥಿತಿಯ ಸಮರ್ಪಕ ನಿರ್ವಹಣೆಗೆ ಪ್ರಮುಖ ಕಾರಣ. ಈ ವಿಕೋಪದ ಪರಿಸ್ಥಿತಿ ಇನ್ನೂ ಮುಂದುವರೆಯುತ್ತಿರುವ ಈ ಸವಾಲಿನ ಸಮಯದಲ್ಲಿ ಪಂಚಾಯತ್ ಆಡಳಿತಕ್ಕೆ ಕೇವಲ ಆಡಳಿತಾಧಿಕಾರಿಯ ಅಥವಾ ಉಸ್ತುವಾರಿ ಸಮಿತಿಯ ನೇಮಕ ಅಸಮಧಾನವಾದದ್ದು, ನಮ್ಮ ಸರ್ಕಾರದ ಈ ಆಲೋಚನೆ. ನಿರ್ಧಾರವನ್ನು ತಕ್ಷಣವೇ ಕೈಬಿಟ್ಟು ಪ್ರಸ್ತುತ ಇರುವ ಚುನಾಯಿತಿ ಪ್ರತಿನಿಧಿಗಳನ್ನು ಒಳಗೊಂಡಿರುವ ಸ್ಥಳೀಯ ಸರ್ಕಾರವನ್ನೆ ಮಧ್ಯಂತರ ಸ್ಥಳೀಯ ಸ್ವಯಂ ಸರ್ಕಾರವಾಗಿ ಮುಂದುವರೆಸಬೇಕಾಗಿ ಈ ಮೂಲಕ ಕರ್ನಾಟಕ ರಾಜ್ಯ ಸರ್ಕಾರವನ್ನು ಒತ್ತಾಯಿಸಿ ನಮ್ಮ ಪಂಚಾಯತ್ ಸಾಮಾನ್ಯ ಸಭೆಯ ನಿರ್ಣಯವನ್ನು ಮಂಡಿಸುತ್ತೇವೆ. ಈ ಪಂಚಾಯತ್‌ನ ಜನರಿಂದ ಚುನಾಯಿತರಾದ ನಾವು ಸ್ಥಳೀಯ ಸರ್ಕಾರದ ಭಾಗವಾಗಿ ನಮ್ಮ ಗ್ರಾಮದ ಜನರಿಗೆ ಗ್ರಾಮದ ಅಭಿವೃದ್ಧಿಗೆ ಬದ್ಧರಾಗಿದ್ದೇವೆ.

ಅಧ್ಯಕ್ಷರು,
ಚಿಕ್ಕಾಡೆ ಗ್ರಾಮ ಪಂಚಾಯಿತಿ ಕಾರ್ಯಾಲಯ,
ಪಾಂಡವಪುರ ತಾಲ್ಲೂಕು.

ಗ್ರಾಮ ಪಂಚಾಯತ್ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸರ್ವ ಸದಸ್ಯರು, ಚಿಕ್ಕಾಡೆ ಗ್ರಾಮ ಪಂಚಾಯತಿ, ತಾಲ್ಲೂಕು ಪಂಚಾಯತ್ ಪಾಂಡವಪುರ, ಜಿಲ್ಲಾ ಪಂಚಾಯತ್ ಮಂಡ್ಯ.

ಉಪಾಧ್ಯಕ್ಷರು,
ಚಿಕ್ಕಾಡೆ ಗ್ರಾಮ ಪಂಚಾಯಿತಿ ಕಾರ್ಯಾಲಯ,
ಪಾಂಡವಪುರ ತಾಲ್ಲೂಕು.

**ಯಥಾ ಪ್ರತಿ :**

1. ಮಾನ್ಯ ಸಚಿವರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕರ್ನಾಟಕ ಸರ್ಕಾರ.
2. ಹೆಚ್ಚುವರಿ ಮುಖ್ಯ ಕಾರ್ಯದರ್ಶಿಗಳು ಕರ್ನಾಟಕ ಸರ್ಕಾರ.
3. ಪ್ರಧಾನ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಕೆ, ಕರ್ನಾಟಕ ಸರ್ಕಾರ.
4. ಗ್ರಾಮ ಪಂಚಾಯತ್ ಹಕ್ಕೊತ್ತಾಯ ಆಂದೋಲನ, ಕರ್ನಾಟಕ.

ಕರ್ನಾಟಕ ಸರ್ಕಾರ

# ಚಿಕ್ಕಾಡೆ ಗ್ರಾಮ ಪಂಚಾಯಿತಿ ಕಾರ್ಯಾಲಯ

ತಾಲ್ಲೂಕು ಪಂಚಾಯತ್, ಪಾಂಡವಪುರ

ಜಿಲ್ಲಾ ಪಂಚಾಯತ್, ಮಂಡ್ಯ

ಸಂ.ಚಿ.ಗ್ರಾ.ಪಂ: /2020-21

ದಿನಾಂಕ: . .2020

| ಕ್ರ.ಸಂ | ಹೆಸರು | ಪದನಾಮ | ಸಹಿ |
|---|---|---|---|
| 01 | ಪ್ರೇಮ.ಕೆ ಕೋಂ ಸುರೇಶ.ಸಿ.ಎಸ್ | ಅಧ್ಯಕ್ಷರು | K. ಪ್ರೇಮ |
| 02 | ಪುಷ್ಪ.ಪಿ.ಎಸ್. ಕೋಂ ಕೃಷ್ಣಚಾರಿ | ಉಪಾಧ್ಯಕ್ಷರು | ಪುಷ್ಪ |
| 03 | ಸಾಕಮ್ಮ ಕೋಂ ಲೇಎಂ.ಎಸ್.ಬಸವೇಗೌಡ | ಸದಸ್ಯರು | ಸಾಕಮ್ಮ |
| 04 | ಅನಿತಾ.ಡಿ.ಎನ್ ಕೋಂ ಜಗದೀಶ.ಡಿ.ಎಂ | ಸದಸ್ಯರು | ಅನಿತಾ |
| 05 | ಜಿ.ಶಿವಕುಮಾರ ಬಿನ್ ಗೋಪಾಲಚಾರಿ | ಸದಸ್ಯರು | ಶಿವಕುಮಾರ. ಜಿ |
| 06 | ಸಿ.ಆರ್.ರಘು ಬಿನ್ ರಾಮಲಿಂಗೇಗೌಡ ಎನ್ | ಸದಸ್ಯರು | C. R ರಘು |
| 07 | ಸಿ.ವಿ.ರವಿ ಬಿನ್ ವೆಂಕಟೇಗೌಡ .ವಿ | ಸದಸ್ಯರು | ಸಿ. ವಿ. ರವಿ |
| 08 | ಮಂಗಳಗೌರಮ್ಮಕೋಂ ರಾಮಮೂರ್ತಿ ಸಿ | ಸದಸ್ಯರು | Mangalagowramma V. |
| 09 | ಸೌಮ್ಯ.ಜಿ ಕೋಂ ರಾಜೇಶ್ | ಸದಸ್ಯರು | ಸೌಮ್ಯ. ಜಿ |
| 10 | ಗಾಯಿತ್ರಿ ಕೋಂ ತಿಮ್ಮೇಗೌಡ | ಸದಸ್ಯರು | |
| 11 | ಪ್ರಕಾಶ ಬಿನ್ ಸುಡುಗಾಡೇಗೌಡ | ಸದಸ್ಯರು | ಪ್ರಕಾಶ |
| 12 | ಪ್ರೇಮ ಕೋಂ ನಾಗರಾಜು | ಸದಸ್ಯರು | ಪ್ರೇಮ |
| 13 | ವಿನೋದ್ ಕುಮಾರ ಪಿ.ಎಸ್ ಬಿನ್ ಸಣ್ಣಯ್ಯ | ಸದಸ್ಯರು | |
| 14 | ಅರವಿಂದ್ ಡಿ.ಎನ್ ಬಿನ್ ನಾಗರಾಜೇಗೌಡ | ಸದಸ್ಯರು | ಅರವಿಂದ. ಡಿ. ಎನ್ |
| 15 | ತಾಯಮ್ಮ ಕೋಂ ಸಿದ್ದನಾಯಕ | ಸದಸ್ಯರು | ತಾಯಮ್ಮ |

2020-5-16 16:41